# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** : **87 (603)**
**ಮಾನ್ಯ ಸದಸ್ಯರ ಹೆಸರು** : **ಶ್ರೀ ಗೋವಿಂದರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)**
**ಉತ್ತರಿಸುವ ದಿನಾಂಕ** : **11.07.2023**
**ಉತ್ತರಿಸುವ ಸಚಿವರು** : **ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು**

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಿಂದ ಕರ್ನಾಟಕ ಕೈಗಾರಿಕೆ ಅಭಿವೃದ್ಧಿ ಮಂಡಳಿಗೆ ಎಷ್ಟು ವಿಶೇಷ ಭೂಸ್ವಾಧೀನ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. | ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ಬರುವ 12 ವಿಶೇಷ ಭೂಸ್ವಾಧಿನಾಧಿಕಾರಿಗಳ ಹುದ್ದೆಗಳಿಗೆ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಒಟ್ಟು 32 ವಿಶೇಷ ಭೂ ಸ್ವಾಧೀನಾಧಿಕಾರಿಗಳನ್ನು ನೇಮಕ ಮಾಡಲಾಗಿರುತ್ತದೆ. |
| ಆ) | ವಿಶೇಷ ಭೂಸ್ವಾಧೀನ ಅಧಿಕಾರಿಗಳು ಅತಿಯಾದ ಭ್ರಷ್ಟಾಚಾರ ನಡೆಯುತ್ತಿದ್ದು, ಸರ್ಕಾರದ ಸ್ವಾಧೀನಪಡಿಸಿಕೊಂಡ ಜಮೀನಿಗೆ ಪರಿಹಾರ ನೀಡಲು ಎಕರೆಗೆ 4 ಲಕ್ಷ ರೂಪಾಯಿ ನೀಡಲು ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೆ.ಐ.ಎ.ಡಿ.ಬಿ. ವತಿಯಿಂದ ಕೈಗಾರಿಕಾ ಪ್ರದೇಶ ಮತ್ತು ಏಕಘಟಕ ಸಂಕೀರ್ಣಗಳಿಗಾಗಿ ಸ್ವಾಧೀನಪಡಿಸಿ ಕೊಳ್ಳುವ ಜಮೀನುಗಳಿಗೆ ಕೆಐಎಡಿ ಕಾಯ್ದೆ ಕಲಂ 28(4) ರಡಿ ಅಂತಿಮ ಅಧಿಸೂಚನೆ ಹೊರಡಿಸಿದ ನಂತರ, ಭೂಪರಿಹಾರ ದರ ನಿಗಧಿಪಡಿಸುವ ಸಲುವಾಗಿ ಸಂಬಂಧಪಟ್ಟ ಜಿಲ್ಲಾಧಿಕಾರಿ/ ಮಂಡಳಿಯ ವಿಶೇಷ ಜಿಲ್ಲಾಧಿಕಾರಿ ಯವರ ಅಧ್ಯಕ್ಷತೆಯಲ್ಲಿ ಜರುಗುವ ಭೂದರ ನಿರ್ಧರಣಾ ಸಲಹಾ ಸಮಿತಿ ಸಭೆಯಲ್ಲಿ ಭೂಮಾಲೀಕರೊಂದಿಗೆ ಸಮಾಲೋಚಿಸಿ ಪ್ರಸ್ತಾವಿತ ಪ್ರದೇಶದಲ್ಲಿನ ಮಾರ್ಗ ಸೂಚಿ ದರ ಮತ್ತು ಪ್ರಾಥಮಿಕ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಹಿಂದಿನ 3 ವರ್ಷಗಳ ಮಾರಾಟದ ಅಂಕಿ-ಅಂಶಗಳನ್ನು ಪರಿಗಣಿಸಿ ಶಿಫಾರಸ್ಸು ಮಾಡುವ ದರಕ್ಕೆ ಮಂಡಳಿ ಸಭೆಯ ಅನುಮೋದನೆ ಪಡೆದು ನಿಯಮಾನುಸಾರ ಪರಿಹಾರ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಬಂದಿದ್ದಲ್ಲಿ, ಸರ್ಕಾರ ಅಂತಹ ಅಧಿಕಾರಿಗಳ ಮೇಲೆ ತೆಗೆದುಕೊಂಡ ಕ್ರಮವೇನು ಹಾಗೂ ರೈತರು ತೆಗೆದುಕೊಳ್ಳುವ ಪರಿಹಾರದ ಹಣದಲ್ಲಿ ಎಕರೆಗೆ 4 ಲಕ್ಷ ರೂಪಾಯಿ ನೀಡಲು ಸರ್ಕಾರದ ನಿಯಮ ಇದೆಯೇ; (ಪೂರ್ಣ ವಿವರ ಒದಗಿಸುವುದು) | |
| ಈ) | ಪ್ರಸ್ತುತ ಕಾಯನಿರ್ವಹಿಸುತ್ತಿರುವ ವಿಶೇಷ ಭೂಸ್ವಾಧೀನ ಅಧಿಕಾರಿ ಅತಿಯಾದ ಭ್ರಷ್ಟಾಚಾರ ನಡೆಸುತ್ತಿದ್ದು, ರೈತರಿಗೆ ಹಣಕ್ಕಾಗಿ ಪೀಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇವರ ಮೇಲೆ ಕ್ರಮ ಕೈಗೊಳ್ಳದಿರಲು ಕಾರಣವೇನು; | ಕೆ.ಐ.ಎ.ಡಿ.ಬಿ. ವತಿಯಿಂದ ಸ್ವಾಧೀನಪಡಿಸಿಕೊಂಡ ಜಮೀನಿಗೆ ಪರಿಹಾರ ಪಾವತಿಸುವ ಅಧಿಕಾರ ಕೆಐಎಡಿ ನಿಯಮಗಳು 1966 ರ ನಿಯಮ 14 ರಡಿ ವಿಶೇಷ ಭೂಸ್ವಾಧೀನಾಧಿಕಾರಿಯವರಿಗೆ ಪ್ರದತ್ತವಾಗಿದ್ದು, ಸದರಿ ಅಧಿಕಾರಿಯು ಅರೆನ್ಯಾಯಿಕ ಪ್ರಾಧಿಕಾರಿಯಾಗಿರುತ್ತಾರೆ. |

| | | |
|---|---|---|
| | | ಮಂಡಳಿಯ ಭೂಸ್ವಾಧೀನಕ್ಕೆ ಒಳಪಟ್ಟ ಜಮೀನುಗಳಿಗೆ ಪರಿಹಾರ ಪಾವತಿಸುವ ಕುರಿತಂತೆ ಭೂಮಾಲೀಕರಿಂದ ಅಗತ್ಯ ದಾಖಲೆಗಳನ್ನು ಪಡೆದು, ಪ್ರಕರಣವನ್ನು ಸಮಗ್ರವಾಗಿ ಪರಿಶೀಲಿಸಿ ಯಾವುದೇ ರೀತಿಯ ಭ್ರಷ್ಟಾಚಾರಕ್ಕೆ ಅವಕಾಶ ನೀಡದಂತೆ ಅರ್ಹ ಭೂಮಾಲೀಕರಿಗೆ ಆದ್ಯತೆ ಮೇರೆಗೆ ಪರಿಹಾರ ಪಾವತಿಸುವಂತೆ ಮಂಡಳಿಯ ಎಲ್ಲಾ ವಿಶೇಷ ಭೂ ಸ್ವಾಧೀನಾಧಿಕಾರಿಯವರಿಗೆ ಸೂಚನೆ ನೀಡಲಾಗಿರುತ್ತದೆ.<br><br>ಮುಂದುವರೆದು, ಕೆಲವು ಭೂಸ್ವಾಧೀನಾಧಿಕಾರಿಗಳ ವಿರುದ್ಧ ಭೂಮಾಲೀಕರು/ಸಾರ್ವಜನಿಕರು ದೂರುಗಳನ್ನು ನೀಡಿದ್ದು, ಸದರಿ ದೂರುಗಳನ್ನು ನಿಯಮಾನುಸಾರ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಮಂಡಳಿಗೆ ತಿಳಿಸಲಾಗಿದೆ. |
| ಉ) | ರೈತರ ಜಮೀನನ್ನು ಭೂಸ್ವಾಧೀನ ಪಡಿಸಿಕೊಂಡ ಮೇಲೆ ಅವರಿಗೆ ಪರಿಹಾರ ನೀಡಲು ಕಾಲಮಿತಿ ಇದೆಯೇ; ಇದ್ದಲ್ಲಿ, ಇವರ ಹಣವನ್ನು ನೇರವಾಗಿ ಅವರ ಖಾತೆಗಳಿಗೆ ಜಮಾ ಮಾಡಲು ವಿಳಂಬ ಮಾಡುತ್ತಿರುವ ಉದ್ದೇಶವೇನು? | ಸರ್ಕಾರದ ಸುತ್ತೋಲೆ ದಿನಾಂಕ: 01-09-2020 ರಲ್ಲಿ ಭೂಪರಿಹಾರ ಪಾವತಿ ಕಾರ್ಯವನ್ನು ಪೂರ್ಣಗೊಳಿಸುವ ಕುರಿತಂತೆ ಭೂದರ ನಿರ್ಧರಣಾ ಸಲಹಾ ಸಮಿತಿ ಶಿಫಾರಸ್ಸು ಮಾಡುವ ಒಪ್ಪಂದದ ದರವು ಮಂಡಳಿ ಸಭೆಯಲ್ಲಿ ಅನುಮೋದನೆಗೊಂಡ ದಿನಾಂಕದಿಂದ 3 ತಿಂಗಳೊಳಗಾಗಿ ಪರಿಹಾರ ಪಾವತಿ ಕಾರ್ಯವನ್ನು ಪೂರ್ಣಗೊಳಿಸುವಂತೆ ಹಾಗೂ ಒಪ್ಪಂದದ ದರದಲ್ಲಿ ಭೂಪರಿಹಾರ ಪಡೆಯದ ಮತ್ತು ಸಿವಿಲ್ ವಿವಾದಗಳಿರುವ ಪ್ರಕರಣಗಳಿಗೆ 45 ದಿನದೊಳಗಾಗಿ ಅವಾರ್ಡ್ ರಚಿಸಿ ಪರಿಹಾರದ ಹಣವನ್ನು ನ್ಯಾಯಾಲಯದಲ್ಲಿ ಠೇವಣಿ ಇಡಲು ಕ್ರಮವಹಿಸುವಂತೆ ಕಾಲಮಿತಿ ನಿಗಧಿಪಡಿಸಿದೆ.<br><br>ಮುಂದುವರೆದು, ಕಲಂ 28(4) ರಡಿ ಅಂತಿಮ ಅಧಿಸೂಚನೆ ಹೊರಡಿಸಿ ಸ್ವಾಧೀನಪಡಿಸಿಕೊಳ್ಳುವ ಜಮೀನಿನ ಪರಿಹಾರದ ಹಣವನ್ನು ಆದ್ಯತೆ ಮೇರೆಗೆ ಸಂಬಂಧಪಟ್ಟ ರೈತರು/ಖಾತೆದಾರರು/ ಹಿತಾಸಕ್ತಿದಾರರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಆರ್.ಟಿ.ಜಿ.ಎಸ್. ಮುಖಾಂತರ ಜಮಾ ಮಾಡಲಾಗುತ್ತಿದೆ. |

**ಸಂಖ್ಯೆ: ಸಿಐ 143 ಐಎಪಿ 2023**

**(ಎಂ.ಬಿ. ಪಾಟೀಲ)**
**ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ**
**ಮೂಲಸೌಲಭ್ಯ ಅಭಿವೃದ್ಧಿ ಸಚಿವರು**